**ದಿನಾಂಕ: 23.11.2020 ರಂದು 11-00 ಗಂಟೆಗೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |
| **ಸದಸ್ಯರುಗಳು** | ಎ.ಎಸ್.ಐ. ಜಯನಗರ ಟ್ರಾಫಿಕ್ ಪೊಲೀಸ್ |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |
| **ಸಾರ್ವಜನಿಕರು** | ಶ್ವೇತಾ RWA (WOW) |
| **ಸಾರ್ವಜನಿಕರು** | ಶಕೀಲಾ ಭಾನು RWA (WOW) |
| **ಸಾರ್ವಜನಿಕರು** | ಸುನೀಲ್ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀ ರಾಮು .ಎಸ್, ಸಹಾಯಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು ಹಾಗೂ ಸಾರ್ವಜನಿಕರಿಗೆ ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- ಅಧ್ಯಕ್ಷರು ಮಾತನಾಡುತ್ತಾ ಎಲ್ಲರಿಗೂ ಸ್ವಾಗತ ಕೋರುತ್ತಾ ಯಾವುದೇ ರೀತಿಯ ದೂರುಗಳು ಬರದಂತೆ ಅಧಿಕಾರಿಗಳು ಕ್ರಮವಹಿಸಬೇಕೆಂದು ಸೂಚಿಸಿ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳಿಗೆ ಕ್ರಮ ಕೈಗೊಂಡ ಬಗ್ಗೆ ಚರ್ಚಿಸಿದರು.

*ಮು.ತಿ.ನೋ*

Scanned with CamScanner

**<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>**

- ಕೊವಿಡ್-19 ರಿಂದ ಈವರೆಗೆ ಒಟ್ಟು ಪಾಸಿಟಿವ್ ಆದವರು, ಗುಣಮುಖರಾದವರು ಹಾಗೂ ಹಾಲಿ ಪಾಸಿಟಿವ್ ಇರುವವರ ವಿವರಗಳನ್ನು ಪಡೆಯಲಾಯಿತು. ಹಾಗೂ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

- ರಾಗಿಗುಡ್ಡ ಸ್ಲಂನಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಸಾರ್ವಜನಿಕರ ಕೋರಿಕೆಯನ್ನು ತಿಳಿಸಲಾಗಿ ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು ಸದರಿ ಸ್ಲಂನಲ್ಲಿನ ಸಂಪರ್ಕಗಳು ಅನಧಿಕೃತವಾಗಿದ್ದು, ಅಧಿಕೃತವಾದ ನಂತರ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

- 11ನೇ ಅಡ್ಡರಸ್ತೆಯ 9ನೇ ಮುಖ್ಯರಸ್ತೆಯಲ್ಲಿ ಮಳೆನೀರು ಸರಾಗವಾಗಿ ಹರಿಯಲು ಹಾಗೂ ಡೇಬ್ರಿಸ್‌ಅನ್ನು ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಹಾಗೂ ಇಂಜಿನಿಯರ್‌ರವರಿಗೆ ತಿಳಿಸಲಾಯಿತು. ಹಾಗೂ ಅಲ್ಲಿ ಇಂಗು ಗುಂಡಿಗಳನ್ನು ನಿರ್ಮಿಸಲು ಸೂಚಿಸಲಾಯಿತು.

- ಎಸ್‌ಡಬ್ಲ್ಯೂಡಿ ರವರು ಕಾಮಗಾರಿಯನ್ನು ನಿರ್ವಹಿಸಿ 17ನೇ ಮತ್ತು 18ನೇ ಮುಖ್ಯರಸ್ತೆಯಲ್ಲಿ ಅಲ್ಲೇ ಬಿಟ್ಟಿರುವ ಡೇಬ್ರಿಸ್‌ಅನ್ನು ತೆರವುಗೊಳಿಸಲು ಸೂಚಿಸಲಾಯಿತು.

- ಪಾರ್ಕ್‌ನ ಅಭಿವೃದ್ಧಿಗಾಗಿ ಸಂಬಂಧಪಟ್ಟ ಇಲಾಖೆಯಾದ ಯೋಜನೆ (ದಕ್ಷಿಣ) ರವರಿಗೆ ತಿಳಿಸಲು ಸೂಚಿಸಲಾಯಿತು.

- ಜೆ.ಪಿ.ನಗರ ವ್ಯಾಪ್ತಿಯ 18ನೇ, 17ನೇ ಮತ್ತು 17ನೇ ಎ ಬಿ ಮುಖ್ಯರಸ್ತೆಗಳಲ್ಲಿ ಬೆಳೆದಿರುವಂತಹ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಅರಣ್ಯ ಇಲಾಖೆರವರಿಗೆ ಸೂಚಿಸಿದರು.

- ಘನತ್ಯಾಜ್ಯ ಹಾಗೂ ಡೆಬ್ರಿಸ್‌ಅನ್ನು ತೆರವುಗೊಳಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ಹಾಗೂ ಇಂಜಿನಿಯರ್‌ರವರಿಗೆ ತಿಳಿಸಲು ಸೂಚಿಸಿದರು.

- ವಾರ್ಡ್ ಸಂಖ್ಯೆ 177 ಜೆ.ಪಿ.ನಗರ ಮಾರೇನಹಳ್ಳಿಯ ಪ್ರದೇಶಗಳಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಬಿಡಬ್ಲ್ಯೂಎಸ್ಎಸ್‌ಬಿರವರಿಗೆ ಸೂಚಿಸಿದರು.

Scanned with CamScanner

- ಬೆಸ್ಕಾಂರವರಿಗೆ ಮತ್ತೊಮ್ಮೆ ರಸ್ತೆ ಅಗೆದಿರುವ ಗುಂಡಿಗಳನ್ನು ಮತ್ತೊಮ್ಮೆ ಮುಚ್ಚಲು ಸೂಚಿಸಲಾಯಿತು.

- ಘನತ್ಯಾಜ್ಯ ನಿರ್ವಹಣೆಗೆ ಕಟ್ಟಡದ ಅವಶ್ಯಕತೆ ಇರುವುದಾಗಿ ಮತ್ತು ಪೌರಕಾರ್ಮಿಕರಿಗೆ ಶೌಚಾಲಯದ ವ್ಯವಸ್ಥೆ ಕಲ್ಪಿಸಲು ಕ್ರಮಕೈಗೊಳ್ಳಲು ಹಾಗೂ POW ನಲ್ಲಿ ಅನುದಾನವನ್ನು ಅನುವು ಮಾಡಿಕೊಳ್ಳಲು ಸೂಚಿಸಲಾಯಿತು.

- 9ನೇ ಅಡ್ಡರಸ್ತೆಯ ಬನ್ನೇರುಘಟ್ಟ ಜಂಕ್ಷನ್ ಬಳಿ ಮತ್ತು 17ನೇ ಅಡ್ಡರಸ್ತೆಯಲ್ಲಿ ಅನಧಿಕೃತವಾಗಿ ನಿಲ್ಲಿಸುತ್ತಿರುವ ವಾಹನಗಳನ್ನು ತೆರವುಗೊಳಿಸಲು ಟ್ರಾಫಿಕ್ ಪೊಲೀಸ್‌ರವರಿಗೆ ಸೂಚಿಸಲಾಯಿತು.

- ಇಂಜಿನಿಯರ್ ಮತ್ತು ಎಸ್‌ಡಬ್ಲ್ಯೂಎಂ ರವರು ಜೊತೆಗೂಡಿ ಸಾರ್ವಜನಿಕರ ಸಹಯೋಗದೊಂದಿಗೆ ವಾರದಲ್ಲಿ ಒಂದಾದರೂ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ | ಅಧ್ಯಕ್ಷರು |
| ಹಾಗೂ ಸಹಾಯಕ ಅಭಿಯಂತರರು | ವಾರ್ಡ್ ಸಮಿತಿ, ವಾರ್ಡ್ ನಂ. 177 |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

Scanned with CamScanner